## ಕರ್ನಾಟಕ ವಿಧಾನಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 782(929) |
| ಸದಸ್ಯರ ಹೆಸರು | : | ಶ್ರೀ ಎಂ. ನಾಗರಾಜು(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 19.08.2025 |
| ಉತ್ತರಿಸುವ ಸಚಿವರು | : | ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು |

| ಕ್ರ. ಸಂ | ಕೋರಲಾದ ಮಾಹಿತಿ | ಒದಗಿಸಿರುವ ಮಾಹಿತಿ |
|---|---|---|
| ಅ | ಕಳೆದ 3 ವರ್ಷಗಳಲ್ಲಿ ರಾಜ್ಯದಲ್ಲಿ (ಬೆಂಗಳೂರು ನಗರ ಹೊರತುಪಡಿಸಿ) ನಗರಸಭೆ, ಪುರಸಭೆ ಮತ್ತು ಸ್ಥಳೀಯ ಯೋಜನಾ ಪ್ರಾಧಿಕಾರಗಳ ವ್ಯಾಪ್ತಿಗೆ ಒಳಪಡುವ ಪ್ರದೇಶಗಳಲ್ಲಿ ಎಷ್ಟು ಅನಧಿಕೃತ ಬಡಾವಣೆಗಳು ಆಗಿವೆ:(ಜಿಲ್ಲಾವಾರು ಮಾಹಿತಿ ನೀಡುವುದು) | ರಾಜ್ಯದ ನಗರ ಯೋಜನಾ ಪ್ರಾಧಿಕಾರಗಳಲ್ಲಿ ಕಳೆದ 03 ವರ್ಷಗಳಲ್ಲಿ ಯಾವುದೇ ಅಕ್ರಮ ಬಡಾವಣೆಗಳ ನಿರ್ಮಾಣವಾಗಿರುವುದಿಲ್ಲ.<br><br>ರಾಜ್ಯದ ನಗರಾಭಿವೃದ್ಧಿ ಪ್ರಾಧಿಕಾರಗಳಲ್ಲಿ ಕಳೆದ 03 ವರ್ಷಗಳಲ್ಲಿ ನಿರ್ಮಾಣವಾಗಿರುವ ಅಕ್ರಮ ಬಡಾವಣೆಗಳ ವಿವರಗಳನ್ನು ಅನುಬಂಧ-1ರಲ್ಲಿ ಲಗತ್ತಿಸಿದೆ |
| ಆ | ಈ ಅನಧಿಕೃತ ಬಡಾವಣೆಗಳು ರಚನೆ ಆಗುತ್ತಿರುವ ವಿಷಯವು ಸರ್ಕಾರಕ್ಕೆ ಮಾಹಿತಿ ಇದ್ದರೂ ಸಹ ಯಾವುದೇ ಕ್ರಮ ಕೈಗೊಳ್ಳದೇ ಇರುವ ಕಾರಣಗಳೇನು: | • ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ1961 ರ ಕಲಂ 17(4) ರಲ್ಲಿ If any person does any work in contravention of sub-section (1) or in contravention of the modifications and conditions of the sanction granted under sub-section (2) or despite refusal for the sanction under the said sub-section (2), the Planning Authority may direct such person by notice in writing to stop any work in progress and after making an inquiry in the prescribed manner, remove or pull down any work or restore the land to its original condition ಎಂದು ಉಲ್ಲೇಖಿಸಿದ್ದು, ಅದರಂತೆ ಪ್ರಾಧಿಕಾರಗಳು ಅನಧಿಕೃತ ಬಡಾವಣೆಗಳನ್ನು ತಡೆಗಟ್ಟಲು ಕಾಯ್ದೆಯಲ್ಲಿ ಅವಕಾಶ ಕಲ್ಪಿಸಲಾಗಿರುತ್ತದೆ. |
| ಇ | ಇತ್ತೀಚಿನ ದಿನಗಳಲ್ಲಿ ನಗರಾಭಿವೃದ್ಧಿ ಇಲಾಖೆ ವತಿಯಿಂದ ಹೊರಡಿಸಲಾದ ಸುತ್ತೋಲೆಯಲ್ಲಿ ಅನಧಿಕೃತ ಬಡಾವಣೆಗಳ ರಚನೆ ತಡೆಯುವಲ್ಲಿ ವಿಫಲರಾದ ಅಧಿಕಾರಿಗಳು ನಿಗಧಿಪಡಿಸಲಾದ ದಂಡವನ್ನು ಪಾವತಿಸಬೇಕು ಎಂದು ತಿಳಿಸಿರುವ ಮೇರೆಗೆ ಇಲ್ಲಿಯವರೆಗೆ ಎಷ್ಟು ಪ್ರಕರಣಗಳಲ್ಲಿ ಮತ್ತು ಎಷ್ಟು ಅಧಿಕಾರಿಗಳಿಗೆ ದಂಡ ವಿಧಿಸಲಾಗಿದೆ? (ಹುದ್ದೆವಾರು ಸ್ಥಳೀಯ ಸಂಸ್ಥೆವಾರು ಮಾಹಿತಿ ನಿಡುವುದು). | |

| | | |
|---|---|---|
| | | • ಅನಧಿಕೃತ ಬಡಾವಣೆಗಳನ್ನು ತಡೆಗಟ್ಟುವ ಸಂಬಂಧ ಹಾಗೂ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ನ್ನು ಉಲ್ಲಂಘಿಸಿ,. ಗ್ರಾಮ ಪಂಚಾಯಿತಿಗಳಿಂದ/ನಗರ ಸ್ಥಳೀಯ ಸಂಸ್ಥೆಗಳಿಂದ ವಿನ್ಯಾಸ ಅನುಮೋದಿಸುತ್ತಿರುವುದನ್ನು ತಡೆಗಟ್ಟುವ ಬಗ್ಗೆ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾದ ರಿಟ್ ಅರ್ಜಿ ಸಂಖ್ಯೆ:19033/2023 ರಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ:15-11-2023 ರಂದು ನೀಡಿರುವ ದೈನಂದಿನ ಆದೇಶದಂತೆ, ಮತ್ತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 4-ಕೆ ಉಲ್ಲಂಘನೆಯಾಗದಂತೆ ಸರ್ಕಾರವು ಆದೇಶ ಸಂಖ್ಯೆ: ನಅಇ 93 ಎಂಡಬ್ಲ್ಯೂಪಿ 2023 (ಭಾ-1), ದಿನಾಂಕ:09-01-2024 ಮತ್ತು ಸರ್ಕಾರದ ಸುತ್ತೋಲೆ ಸಂಖ್ಯೆ: ನಅಇ 93 ಎಂಡಬ್ಲ್ಯೂಪಿ 2023 (ಭಾ-1), ದಿನಾಂಕ:28-08-2024 ರಲ್ಲಿ ವಿನ್ಯಾಸ ಅನುಮೋದನೆಗೆ ಕ್ರಮವಹಿಸುವ ಬಗ್ಗೆ ಆದೇಶ ಹೊರಡಿಸಲಾಗಿರುತ್ತದೆ.<br>• ರಾಜ್ಯದಲ್ಲಿ ಯಾವುದೇ ಅಭಿವೃದ್ಧಿದಾರರು ಸಕ್ಷಮ ಪ್ರಾಧಿಕಾರದಿಂದ ವಿನ್ಯಾಸ ಅನುಮೋದನೆ ಪಡೆಯದೆ ಬಡಾವಣೆ ರೂಪಿಸಿದರೆ, ಅದು ಅನಧಿಕೃತವೆಂದು ಪರಿಗಣಿಸಲಾಗುತ್ತದೆ. ಅವುಗಳಿಗೆ ಸ್ಥಳೀಯ ಸಂಸ್ಥೆಗಳಲ್ಲಿ ಖಾತೆ ತೆರೆಯದಂತೆ ನಿರ್ಬಂಧ ವಿಧಿಸಲಾಗಿದೆ. ಅಲ್ಲದೇ, ಅತಂಹ ಬಡಾವಣೆಗಳಲ್ಲಿನ ನಿವೇಶನಗಳಿಗೆ ಕಟ್ಟಡ ರಹದಾರಿಯನ್ನು ಅನುಮತಿಸುವುದಿಲ್ಲ.<br>• ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 76-FFF ರಲ್ಲಿ ಅನಧಿಕೃತ ಬಡಾವಣೆಗಳನ್ನು ತಡೆಯಲು ವಿಫಲವಾದ ಅಧಿಕಾರಿಯ ವಿರುದ್ಧ ದಂಡ ವಿಧಿಸಲು ಅವಕಾಶವಿರುತ್ತದೆ. ಅದರಂತೆ ಸರ್ಕಾರದ ಅಧಿಸೂಚನೆ ಸಂಖ್ಯೆ-UDD/03/TTP/2020 (E) ದಿನಾಂಕ-08- |

| | | |
|---|---|---|
| | | 04-2025 ರಲ್ಲಿ ದಂಡ ವಿಧಿಸುವ ಅಧಿಕಾರ ಹಾಗೂ ದಂಡದ ಪ್ರಮಾಣದ ಬಗ್ಗೆಅಧಿಸೂಚನೆ ಹೊರಡಿಸಲಾದ ನಂತರ ನಗರಾಭಿವೃದ್ಧಿ ಮತ್ತು ನಗರ ಯೋಜನಾ ಪ್ರಾಧಿಕಾರಗಳ ವ್ಯಾಪ್ತಿಯಲ್ಲಿ ಯಾವುದೇ ಅನಧಿಕೃತ ಅಭಿವೃದ್ಧಿಗಳು ಕಂಡುಬಂದಿರುವುದಿಲ್ಲ. |

ಕಡತ ಸಂಖ್ಯೆ: ನಅಇ 251 ಬೆಮಪ್ರಾ 2025 (ಇ)

**(ಬಿ.ಎಸ್.ಸುರೇಶ)**
ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು